**Bangalore**
**Regional Bulletin In Kannada**
**27.07.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಪ್ರವಾಹ ಪೀಡಿತ ಪ್ರದೇಶಗಳಿಗೆ ಕಂದಾಯ ಸಚಿವ ಕೃಷ್ಣ ಬೈರೇಗೌಡ ಭೇಟಿ, ಪರಿಶೀಲನೆ

೨. ಶಿರೂರು ಗುಡ್ಡ ಕುಸಿತ ಪ್ರಕರಣ ; ನಾಪತ್ತೆಯಾದವರ ಶೀಘ್ರ ಪತ್ತೆಗೆ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಮನವಿ

೩. ಮನ್ ಕಿ ಬಾತ್ ; ದೇಶ-ವಿದೇಶದಲ್ಲಿರುವ ಭಾರತೀಯರನ್ನು ಉದ್ದೇಶಿಸಿ ನಾಳೆ ಪ್ರಧಾನಿ -ಮನದಾಳು ಮಾತು

೪. ರಾಜ್ಯದಲ್ಲಿ ಚುರುಕುಗೊಂಡ ನೈಋತ್ಯ ಮುಂಗಾರು ; ಕರಾವಳಿ, ದಕ್ಷಿಣ ಒಳನಾಡಿನಲ್ಲಿ ಭಾರೀ ಮಳೆ

**<><*<><>*><>**

ಹಾಸನ ಜಿಲ್ಲೆಯಲ್ಲಿ ಸುರಿದ ಭಾರಿ ಮಳೆಗೆಯಿಂದಾಗಿ ಹೇಮಾವತಿ ಜಲಾಶಯದಿಂದ ಭಾರಿ ಪ್ರಮಾಣದ ನೀರು ಹರಿದು ಸಂಭವಿಸಿದ ಪ್ರವಾಹಪೀಡಿತ ಪ್ರದೇಶಗಳಿಗೆ ಇಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಹಾಸನ ಜಿಲ್ಲೆಯ ಹೊಳೆನರಸೀಪುರ ಪಟ್ಟಣದ ಯಾಸೀನ್ ನಗರ ಸೇರಿದಂತೆ ವಿವಿಧೆಡೆ ನೀರು ಹರಿದು ಮನೆಗಳು ಜಲಾವೃತವಾಗಿರುವ ಸ್ಥಳಗಳಿಗೆ ಭೇಟಿ ನೀಡಿ ನಿವಾಸಿಗಳ ಅಹವಾಲುಗಳನ್ನು ಸ್ವೀಕರಿಸಿದರು. ಬಳಿಕ ಕಾಳಜಿ ಕೇಂದ್ರಗಳಿಗೂ ಭೇಟಿ ನೀಡಿ ಪರಿಶೀಲನೆ ನಡೆಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಈ ಬಾರಿ ಶೇಖಡ ೨೮ರಷ್ಟು ವಾಡಿಕೆಗಿಂತ ಹೆಚ್ಚು ಮಳೆಯಾಗಿದ್ದು, ಮಳೆಯಿಂದ ಈ ಬಾರಿ ಬಹುತೇಕ ಜಲಾಶಯಗಳಿಗೆ ಒಳಹರಿವು ಹೆಚ್ಚಾಗಿ, ಭರ್ತಿಯಾಗಿವೆ. ಜಲಾಶಯಗಳಿಂದ ನೀರನ್ನು ನದಿಗೆ ಬಿಡುವಾಗ ಕೆಲವೆಡೆ ನದಿ ಪಾತ್ರದ ಪ್ರದೇಶಗಳಿಗೆ ನೀರು ನುಗ್ಗಿದೆ ಎಂದರು. ಮನೆ ಅಂಗಳಕ್ಕೆ ನೀರು ನುಗ್ಗಿ ವಾಸಿಸಲು ಆಗದೆ ಇರುವ ಸಂದರ್ಭಗಳು ಎದುರಾದಾಗ, ಅಂತಹ ಸ್ಥಳಗಳಲ್ಲಿ ಹಾರೈಕೆ ಕೇಂದ್ರಗಳನ್ನು ಸ್ಥಾಪಿಸಿ, ಸಂತ್ರಸ್ತರಿಗೆ ಎಲ್ಲ ರೀತಿಯ ಮೂಲಸೌಕರ್ಯ ಒದಗಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಈಗಾಗಲೇ ರಾಜ್ಯದಲ್ಲಿ ಒಟ್ಟು ೧೧೪ ಆರೈಕೆ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ತಿಳಿಸಿದರು.

**<><*<><>*><>**

ಅಂಕೋಲಾ ತಾಲೂಕಿನ ಶಿರೂರು ಗುಡ್ಡ ಕುಸಿತ ಸ್ಥಳಕ್ಕೆ ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ನಾಪತ್ತೆ ಕಣ್ಮರೆಯಾದವರ ಹುಡುಕಾಟಕ್ಕೆ ಕೈಗೊಂಡಿರುವ ಕ್ರಮಗಳು ಹಾಗೂ ಹಾಲಿ ಕಾರ್ಯಾಚರಣೆ ಬಗ್ಗೆ ಜಿಲ್ಲಾಧಿಕಾರಿ ಕೆ.ಲಕ್ಷ್ಮಿ ಪ್ರಿಯ ಅವರಿಂದ ಮಾಹಿತಿ ಪಡೆದರು.ದುರ್ಘಟನೆಯಲ್ಲಿ ನಾಪತ್ತೆಯಾದ ಸ್ಥಳೀಯರಾದ ಜಗನ್ನಾಥ ನಾಯ್ಕ, ಲೋಕೇಶ ನಾಯ್ಕ ಹಾಗೂ ಕೇರಳದ ಚಾಲಕ ಅರ್ಜುನ್ ಅವರನ್ನು ಶೀಘ್ರ ಪತ್ತೆ ಮಾಡುವಂತೆ ರಕ್ಷಣಾ ತಂಡಕ್ಕೆ ಮನವಿ ಮಾಡಿದರು. ನಾಪತ್ತೆಯಾದ ಜಗನ್ನಾಥ ನಾಯ್ಕ ಅವರ ಮನೆಗೆ ಸಂಸದರು

ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ನಂತರ ಶಿರೂರು ಕಾಳಜಿ ಕೇಂದ್ರಕ್ಕೆ ಭೇಟಿ ನೀಡಿ ಸಂತ್ರಸ್ತರಿಗೆ ಸಾಂತ್ವನ ಹೇಳಿದರು. ಈ ಸಂದರ್ಭದಲ್ಲಿ ಮಾಜಿ ಶಾಸಕಿ ರೂಪಾಲಿ ನಾಯ್ಕ ಹಾಜರಿದ್ದರು.

<><*<><>*><>

ಕಲಬುರಗಿ ನಗರದಲ್ಲಿ ವಿವಿಧ ಇಲಾಖೆಯಡಿ ನಡೆಯುತ್ತಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಇಂದು ಪರಿಶೀಲನೆ ನಡೆಸಿದರು. ಗುಲಬರ್ಗಾ ವಿಶ್ವವಿದ್ಯಾಲಯ ಆವರಣದಲ್ಲಿಯೇ ಸುಮಾರು ೮೨.೫೬ ಕೋಟಿ ರೂಪಾಯಿ ವೆಚ್ಚದಲ್ಲಿ ಲೋಕೋಪಯೋಗಿ ಇಲಾಖೆಯಿಂದ ನಿರ್ಮಿಸಲಾಗುತ್ತಿರುವ ತಲಾ ೫೦೦ ಬಾಲಕ-ಬಾಲಕಿಯರ ಸಾಮರ್ಥ್ಯದ ಪಂಡಿತ್ ದೀನ ದಯಾಳ ಸೌಹಾರ್ದ ವಸತಿ ನಿಲಯ ಬಹುಮಹಡಿ ಸಮುಚ್ಛಯ ಕಟ್ಟಡ ವೀಕ್ಷಿಸಿದರು. ನಂತರ ಐ.ಟಿ-ಬಿ.ಟಿ ಇಲಾಖೆಯಿಂದ ಎಲೆಕ್ಟ್ರಾನಿಕ್ ಕ್ಲಸ್ಟರ್ ಸ್ಥಾಪನೆಗೆ ಕುಸನೂರ ಮತ್ತು ಹಡಗಿಲ್ ಹಾರುತಿ ಗ್ರಾಮಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ಮಾಡಿದರು.

<><*<><>*><>

ಶರಾವತಿ ಯೋಜನೆಯ ಲಿಂಗನಮಕ್ಕಿ ಜಲಾನಯನ ಪ್ರದೇಶದಲ್ಲಿ ಸತತವಾಗಿ ಮಳೆ ಬೀಳುತ್ತಿರುವುದರಿಂದ ಲಿಂಗನಮಕ್ಕಿ ಜಲಾಶಯಕ್ಕೆ ಭಾರಿ ಪ್ರಮಾಣದಲ್ಲಿ ನೀರು ಹರಿದು ಬರುತ್ತಿದ್ದು, ಈ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಪ್ರವಾಹದ ಎಚ್ಚರಿಕೆ ಹೊರಡಿಸಿದೆ. ಲಿಂಗನಮಕ್ಕಿ ಜಲಾಶಯದ ನೀರಿನ ಮಟ್ಟವು ದಿನೇ ದಿನೆ ಏರುತ್ತಿದೆ. ಜಲಾಶಯದ ಗರಿಷ್ಠ ಮಟ್ಟವು ೧೮೧೯ ಅಡಿಗಳಾಗಿದ್ದು, ಈಗಿನ ನೀರಿನ ಮಟ್ಟ ೧೮೦೭ ಅಡಿಗಳಿಗೆ ತಲುಪಿದೆ. ಸದ್ಯ ಲಿಂಗನಮಕ್ಕಿ ಜಲಾಶಯದ ಒಳಹರಿವು ೭೪ ಸಾವಿರದ ೬೦೦ ಕ್ಯೂಸೆಕ್ ಗಳಿಗಿಂತಲೂ ಅಧಿಕವಾಗಿದ್ದು, ಇದೇ ರೀತಿಯಲ್ಲಿ ಜಲಾಶಯಕ್ಕೆ ಬರುವ ನೀರಿನ ಹರಿವು ಮುಂದುವರೆದರೆ, ಜಲಾಶಯವು ಅತೀ ಶೀಘ್ರದಲ್ಲಿ ಗರಿಷ್ಠ ಮಟ್ಟ ತಲುಪುವ ಸಾಧ್ಯತೆ ಇದೆ. ಅಣೆಕಟ್ಟೆಯ ಕೆಳದಂಡೆಯಲ್ಲಿ ಹಾಗೂ ನದಿಯ ಪಾತ್ರದುದ್ದಕ್ಕೂ ವಾಸಿಸುತ್ತಿರುವ ಸಾರ್ವಜನಿಕರು ತಮ್ಮ ಜನ, ಜಾನುವಾರುಗಳೊಂದಿಗೆ ಸುರಕ್ಷಿತ ಪ್ರದೇಶಕ್ಕೆ ತೆರಳುವಂತೆ ಹಾಗೂ ಪ್ರವಾಸಿಗರು, ಸಾರ್ವಜನಿಕರು ನದಿಗೆ ಇಳಿಯದಂತೆ ಪ್ರಕಟಣೆ ತಿಳಿಸಿದೆ.

<><*<><>*><>

ಘಟಪ್ರಭಾ ನದಿಯಿಂದಾಗಿ ಬಾಗಲಕೋಟೆ ಜಿಲ್ಲೆಯ ಮಿರ್ಜಿ ಗ್ರಾಮ ಪ್ರವಾಹದಿಂದ ತುತ್ತಾಗಿದೆ. ಹನ್ನೆರಡು ಮನೆಗಳು ಪ್ರವಾಹದಿಂದ ಹಾನಿಗೊಳಗಾಗಿದ್ದು, ಸಂತ್ರಸ್ತರನ್ನು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಿ, ಅವರಿಗೆ ಸೂಕ್ತ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೭೬ ಸಾವಿರ ಕ್ಯುಸೆಕ್ ನೀರು ಘಟಪ್ರಭಾ ನದಿಗೆ ಹರಿದು ಬರುತ್ತಿದೆ. ಆಲಮಟ್ಟಿ ಜಲಾಶಯದಿಂದ ಮೂರು ಲಕ್ಷ ಕ್ಯುಸೆಕ್ ನೀರು ಬಿಡುಗಡೆ ಮಾಡಲಾಗುತ್ತಿದೆ ಎಂದರು. ಕೃಷ್ಣಾ ನದಿಯಿಂದ ಮೂರು ಲಕ್ಷ ಕ್ಯುಸೆಕ್ ನೀರು ಹೊರಬರುತ್ತಿದೆ. ಅಲ್ಲದೇ ಮುತ್ತೂರು, ಮೈಗೂರು ಗ್ರಾಮಗಳು ನಡುಗಡ್ಡೆಯಾಗಿವೆ. ೫೮ ಕುಟುಂಬಗಳನ್ನು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ. ಪ್ರವಾಹ ಪರಿಸ್ಥಿತಿ ನಿಭಾಯಿಸಲು ಸರ್ಕಾರ ಸಶಕ್ತವಾಗಿದೆ ಎಂದು ಆರ್.ಬಿ.ತಿಮ್ಮಾಪೂರ ಹೇಳಿದರು.

<><*<><>*><>

ಮೈಸೂರು ಹಾಗೂ ಚಾಮರಾಜನಗರ ಭಾಗದ ಕಬ್ಬು ಬೆಳೆಗಾರರೊಂದಿಗೆ ಇಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಸಭೆ ನಡೆಸಿ, ಅವರ ಸಮಸ್ಯೆಗಳನ್ನು ಆಲಿಸಿ, ಅಹವಾಲು ಸ್ವೀಕರಿಸಿದರು. ಈ ವೇಳೆ ಮಾತನಾಡಿದ ಸಚಿವರು, ರೈತರ ಸಮಸ್ಯೆಗಳನ್ನು ಬಗೆಹರಿಸಲು ನಮ್ಮ ಸರ್ಕಾರ ಬದ್ಧವಾಗಿದೆ. ಅದರಂತೆ ಕಬ್ಬು ಬೆಳೆಗಾರರ ಹಿತದೃಷ್ಟಿಯಿಂದ ಸಭೆಯಲ್ಲಿ ತಿಳಿಸಿರುವ ಬೇಡಿಕೆಗಳಿಗೆ ಸರ್ಕಾರವು ಪ್ರಮಾಣಿಕವಾಗಿ ಸ್ಪಂದಿಸುವ ಕೆಲಸ ಮಾಡಲಿದೆ ಎಂದು ಭರವಸೆ ನೀಡಿದರು. ಅಚ್ಚುಕಟ್ಟು ಪ್ರದೇಶದಲ್ಲಿರುವ ಎಲ್ಲಾ ರೈತರ ಜಮೀನಿಗೆ ನೀರು ತಲುಪಿಸಲು ನೀರಾವರಿ ಯೋಜನೆ ರೂಪಿಸಲಾಗಿದೆ. ಈ ನಡುವೆ ನಾಲೆಗಳಿಂದ ಮೋಟಾರ್ ಮೂಲಕ ನೀರು ಪಡೆಯುವವರ ಮೇಲೆ ಕ್ರಮ ಜರುಗಿಸಲಾಗುತ್ತಿರುವ ಬಗ್ಗೆ ದೂರು ಬರುತ್ತಿದ್ದು, ಇದರ ಮಾರ್ಪಾಡಿಗೆ ರೈತರು ನೀಡುವ ಸಲಹೆಗಳನ್ನು ಸರ್ಕಾರ ಪರಿಗಣಿಸಲಿದೆ ಎಂದರು. ರೈತರು ತಾವು ಬೆಳೆದ ಬೆಳೆ ಸಾಗಿಸಲು ಅನುಕೂಲವಾಗುವ 'ನಮ್ಮ ಹೊಲ, ನಮ್ಮ ರಸ್ತೆಯನ್ನು' ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಅಭಿವೃದ್ಧಿಪಡಿಸಲು ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ತಿಳಿಸಿದರು.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರ ಮಾಸಿಕ ಮನ್ ಕಿ ಬಾತ್ ಕಾರ್ಯಕ್ರಮ ನಾಳೆ ಆಕಾಶವಾಣಿಯಲ್ಲಿ ಬೆಳಗ್ಗೆ ೧೧ ಗಂಟೆಗೆ ಪ್ರಸಾರವಾಗಲಿದೆ. ದೇಶ ಮತ್ತು ವಿದೇಶದಲ್ಲಿರುವ ಭಾರತೀಯರನ್ನು ಉದ್ದೇಶಿಸಿ ಅವರು ತಮ್ಮ ಮನದಾಳದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೧೨ನೇ ಆವೃತ್ತಿಯಾಗಿದೆ. ಮೂರನೇ ಬಾರಿಗೆ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡ ನಂತರ ನರೇಂದ್ರ ಮೋದಿ ಅವರು ಎರಡನೇ ಬಾರಿಗೆ ಮನ್ ಕಿ ಬಾತ್ ಕಾರ್ಯಕ್ರಮ ನಡೆಸಿಕೊಡುತ್ತಿದ್ದಾರೆ. ಆಕಾಶವಾಣಿ ಹಾಗೂ ದೂರದರ್ಶನದ ಎಲ್ಲ ತರಂಗಾಂತರಗಳಲ್ಲಿ ಈ ಕಾರ್ಯಕ್ರಮ ಮೂಡಿಬರಲಿದೆ. ಅಲ್ಲದೆ ಯೂಟ್ಯೂಬ್, ಸಾಮಾಜಿಕ ಜಾಲತಾಣಗಳಲ್ಲೂ ಮನ್ ಕಿ ಬಾತ್ ಕಾರ್ಯಕ್ರಮ ಬಿತ್ತರವಾಗಲಿದೆ.

**<><*<><>*><>**

ಬದುಕಿನಲ್ಲಿ ಶಿಕ್ಷಣ ಬಹಳ ದೊಡ್ಡ ಪಾತ್ರವಹಿಸಲಿದ್ದು, ಶಿಕ್ಷಣ ಪಡೆಯುವುದರಿಂದ ಸ್ವಾವಲಂಬನೆಯಿಂದ ಜೀವನ ನಡೆಸುವ ಸಾಮರ್ಥ್ಯ ಬರಲಿದೆ ಎಂದು ರಾಜ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು. ಚಿತ್ರದುರ್ಗ ನಗರದ ತರಾಸು ರಂಗಮಂದಿರದಲ್ಲಿ ಶಿವಮೊಗ್ಗ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಹಿರಿಯೂರು ತೋಟಗಾರಿಕೆ ಮಹಾವಿದ್ಯಾಲಯ ಹಾಗೂ ಶಾಲಾ ಶಿಕ್ಷಣ ಇಲಾಖೆ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ 'ಕೃಷಿ ಶಿಕ್ಷಣ ಸುಗ್ಗಿ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಜಿಲ್ಲೆಯ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಕೃಷಿ ಶಿಕ್ಷಣ ಮಾಹಿತಿ ನೀಡುವ ಉದ್ದೇಶದಿಂದ ಕೃಷಿ ಶಿಕ್ಷಣ ಸುಗ್ಗಿ ಕಾರ್ಯಕ್ರಮ ಆಯೋಜಿಸಲಾಗಿದೆ. ರಾಜ್ಯದಲ್ಲಿರುವ ಕೃಷಿ ಸಂಬಂಧಿತ ಶಿಕ್ಷಣ ಸಂಸ್ಥೆಗಳು ಮತ್ತು ಅಲ್ಲಿರುವ ಪದವಿ ಕೋರ್ಸ್‌ಗಳು ಹಾಗೂ ಪ್ರವೇಶ ಪ್ರಕ್ರಿಯೆಯ ಬಗ್ಗೆ ಕಾರ್ಯಕ್ರಮದಲ್ಲಿ ಮಾಹಿತಿ ದೊರೆಯಲಿದ್ದು, ಎಲ್ಲ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆಯಬೇಕು ಎಂದು ಹೇಳಿದರು. ಕಾರ್ಯಕ್ರಮದ ಅಂಗವಾಗಿ ಕೃಷಿ ಯಂತ್ರೋಪಕರಣಗಳು ಹಾಗೂ ಕೃಷಿ ಬೆಳೆಗಳ ವಸ್ತುಪ್ರದರ್ಶನ ಮಳಿಗೆಗಳು, ಕೃಷಿ ಉತ್ಪನ್ನ, ಮೌಲ್ಯವರ್ಧಿತ ಉತ್ಪನ್ನಗಳ ಆಹಾರ, ತಿನಿಸುಗಳನ್ನು ಪ್ರದರ್ಶಿಸಲಾಯಿತು.

<><*<><>*><>

ಕೋಲಾರ ಜಿಲ್ಲೆಯಲ್ಲಿ ತಂಬಾಕು ಸೇವನೆ ದುಷ್ಪರಿಣಾಮಗಳ ಕುರಿತು ಸಾರ್ವಜನಿಕರಿಗೆ ಹಾಗೂ ಜನದಟ್ಟಣೆ ಇರುವ ಅಂಗಡಿ ಮುಗ್ಗಟ್ಟುಗಳಲ್ಲಿ ಜಾಗೃತಿ ಮೂಡಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಅಕ್ರಂ ಪಾಷಾ ಸೂಚಿಸಿದರು. ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ತಂಬಾಕು ನಿಯಂತ್ರಣ ಕುರಿತು ಆಯೋಜಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಕೋಟ್ಪಾ ಕಾಯ್ದೆಯಡಿ ೧ ಸಾವಿರದ ೧೮೯ ಪ್ರಕರಣಗಳು ದಾಖಲಾಗಿದ್ದು, ಇದರಿಂದ ೧ ಲಕ್ಷದ ೨೦ ಸಾವಿರ ರೂಪಾಯಿಗಳ ದಂಡ ವಸೂಲಿ ಮಾಡಲಾಗಿದೆ ಎಂದು ತಿಳಿಸಿದರು.

<><*<><>*><>

ಇನ್ನು ಹವಾವರ್ತಮಾನ

ರಾಜ್ಯದಲ್ಲಿ ನೈಋತ್ಯ ಮುಂಗಾರು ಚುರುಕಾಗಿದೆ. ಕರಾವಳಿ ಮತ್ತು ದಕ್ಷಿಣ ಒಳನಾಡಿನ ಹಲವೆಡೆ ಭಾರೀ ಮಳೆಯಾಗಿದೆ. ಇದೇ ವೇಳೆ ಉತ್ತರ ಒಳನಾಡಿನ ಅನೇಕ ಸ್ಥಳಗಳಲ್ಲಿ ಸಾಧಾರಣ ಮಳೆಯಾಗಿದೆ. ಶಿವಮೊಗ್ಗ ಜಿಲ್ಲೆಯ ಅಗೊಂಬೆ ಮತ್ತು ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆಯಲ್ಲಿ ತಲಾ ೧೬ ಸೆಂಟಿಮೀಟರ್ ಮಳೆಯಾಗಿದೆ. ಸೋಮವಾರಪೇಟೆ ೧೫, ಕ್ಯಾಸಲ್ ರಾಕ್ ಮತ್ತು ಶೃಂಗೇರಿಯಲ್ಲಿ ತಲಾ ೧೪, ಗೇರುಸೊಪ್ಪ, ಲೋಂಡಾ, ನಾಪೊಕ್ಲು, ಭಾಗಮಂಡಲ ಮತ್ತು ತರಿಕೇರೆಯಲ್ಲಿ ತಲಾ ೧೧ ಸೆಂಟಿಮೀಟರ್ ಮಳೆಯಾಗಿದೆ. ಮುಂದಿನ ೨೪ ಗಂಟೆಗಳಲ್ಲಿ ಉತ್ತರಕನ್ನಡ, ದಕ್ಷಿಣಕನ್ನಡ, ಉಡುಪಿ, ಬೆಳಗಾವಿ, ಚಿಕ್ಕಮಗಳೂರು ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಧಾರಾಕಾರ ಮಳೆಯಾಗಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರು ಸುತ್ತಮುತ್ತ ಸಾಮಾನ್ಯವಾಗಿ ಮೋಡಕವಿದ ವಾತಾವರಣ. ಹಗುರ ಮಳೆಯಾಗುವ ಸಾಧ್ಯತೆಯಿದೆ. ಗರಿಷ್ಠ ೨೭, ಕನಿಷ್ಠ ೨೦ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

<><*<><>*><>

ಸಂಕ್ಷಿಪ್ತ ಸುದ್ದಿಗಳು-೧

೧. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆಗಸ್ಟ್ ತಿಂಗಳಲ್ಲಿ ಕಲಬುರಗಿ ಜಿಲ್ಲಾ ಮಟ್ಟದ ಜನಸ್ಪಂದನಾ ಕಾರ್ಯಕ್ರಮ ನಡೆಸಲಿರುವ ಹಿನ್ನೆಲೆಯಲ್ಲಿ ಇಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ ಅವರು ಗುಲಬರ್ಗಾ ವಿ.ವಿ. ಆವರಣದ ಸ್ಥಳ ಪರಿಶೀಲನೆ ನಡೆಸಿದರು.

೨. ಈ ವರ್ಷದ ಜನವರಿಯಿಂದ ಇಲ್ಲಿಯವರೆಗೆ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಒಟ್ಟು ೧೭೮ ಡೆಂಘೆ ಪ್ರಕರಣಗಳು ವರದಿಯಾಗಿದ್ದು, ಈ ಪೈಕಿ ಗ್ರಾಮೀಣ ಪ್ರದೇಶಗಳಲ್ಲಿ ೧೪೩ ಹಾಗೂ ನಗರ ಪ್ರದೇಶ ವ್ಯಾಪ್ತಿಯಲ್ಲಿ ೩೫ ಪ್ರಕರಣಗಳು ದೃಢಪಟ್ಟಿವೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಕಟಣೆ ತಿಳಿಸಿದೆ.

೩. ಗಾಂಜಾ ಸಂಗ್ರಹಿಸಿಟ್ಟುಕೊಂಡು ಮಾರಾಟ ಮಾಡುತ್ತಿದ್ದ ಮೂವರು ಆರೋಪಿಗಳನ್ನು ಹಾವೇರಿ ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ. ಬಂಧಿತರಿಂದ ೨.೯೬ ಲಕ್ಷ ರೂಪಾಯಿ ಮೌಲ್ಯದ ೧೧ ಕೆಜಿ ೮೪೩ ಗ್ರಾಂ ಗಾಂಜಾ ಜಪ್ತಿ ಮಾಡಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

೪. ಯಾದಗಿರಿ ಜಿಲ್ಲಾ ಪಂಚಾಯಿತಿ ಕಚೇರಿಯ ಮುಂಭಾಗದಲ್ಲಿ ಜಲಜೀವನ ಮಿ**?**ನ್ ಯೋಜನೆ ಕುರಿತು ಜಿಲ್ಲೆಯಲ್ಲಿ ಪ್ರಚಾರ ಕಾರ್ಯಕ್ರಮಕ್ಕೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗರಿಮಾ ಪನ್ವಾರ್ ಚಾಲನೆ ನೀಡಿದರು. ಮಳೆಗಾಲದಲ್ಲಿ ನೀರು ಕಲುಷಿತಗೊಳ್ಳುವ ಸಾಧ್ಯತೆ ಹೆಚ್ಚಿರುತ್ತದೆ. ಹೀಗಾಗಿ ಕುಡಿಯುವ ನೀರಿನ ಬಗ್ಗೆ ಜಾಗರೂಕರಾಗಬೇಕು. ಶುದ್ಧ, ಸುರಕ್ಷಿತ ನೀರನ್ನು ಮಾತ್ರ ಕುಡಿಯಿರಿ. ಆರೋಗ್ಯದ ಕಾಳಜಿ ವಹಿಸಿರಿ ಎಂದು ಸಾರ್ವಜನಿಕರಿಗೆ ಗರಿಮಾ ಪನ್ವಾರ್ ಹೇಳಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**